# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

ಸಿಸಿ ನಂ. 220/2016

ಚಾಸಾ-03 ಫ್ರಾಸಾ-02

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ ಪಡೆದುಕೊಳ್ಳಲಾಯಿತು.
ದಿನಾಂಕ: 21.11.2024

ಹೆಸರು ಃ ಅನಿಲ

ತಂದೆಯ ಹೆಸರು ಃ ಕಲ್ಯಾಣಿ

ವಯಸ್ಸು ಃ 35 ವರ್ಷ

ಉದ್ಯೋಗ ಃ ಒಕ್ಕಲುತನ

ವಾಸಸ್ಥಳ ಃ ಬಡದಾಳ ಗ್ರಾಮ ಅಫಜಲಪೂರ

-: ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:-

ಚಾಸಾ-2 ಮತ್ತು 5 ರವರ ಪರಿಚಯ ಇರುತ್ತದೆ. ಸಾಕ್ಷಿಗೆ ಗುನ್ನೆ ಸ್ಥಳದ ಪಂಚನಾಮೆಯ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-**2** ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-**2**(ಎ) ಎಂದು ಗುರುತಿಸಲಾಯಿತು.

ಊರಲ್ಲಿ ಜಗಳವಾಗಿದ್ದರಿಂದ ಪೋಲಿಸರು ಬಂದಿದ್ದು ಅವರು ಒಂದು ಸಹಿ ಮಾಡು ಅಂತಾ ತಿಳಿಸಿದಕ್ಕಾಗಿ ನಾನುನ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲಾ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಸ.ಸ.ಅ. ರವರಿಂದ**

ದಿಃ 03.11.2018 ರಂದು ಮಧ್ಯಾಹ್ನ 02.00 ರಿಂದ 03.00 ಗಂಟೆ ವರೆಗೆ ನನ್ನ ಹಾಗು ಚಾಸಾ-2 ರವರ ಸಮಕ್ಷಮ ಪೋಲಿಸರು ಗುನ್ಹೆ ಸ್ಥಳದ ಪಂಚನಾಮೆಯನ್ನು ಮಾಡಿರುತ್ತಾರೆ ಎಂದರೆ ಸರಿ. ಆಗ ನನ್ನ ಸಮಕ್ಷಮ ಒಂದು ಬಡಿಗೆಯನ್ನು ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

**ಪಾಟೀ ಸವಾಲುಃ** ಆರೋಪಿ ಪರ ಶ್ರೀ PBP ರವರ ಪರ ಶ್ರೀ DSK ವಕೀಲರಿಂದ :-

ನಿಪಿ-2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲಾ. ಪೋಲಿಸರು ಸಹಿ ಮಾಡಲು ತಿಳಿಸಿದ್ದರಿಂದ ನಾನು ಸಹಿ ಮಾಡಿರುತ್ತೇನೆ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲಾ ಎಂದರೆ ಸರಿ.

**ಮರು ವಿಚಾರಣೆಃ - ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ